All India Radio: Bangalore
Regional Bulletin In Kannada
27.07.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

- ಮನ್ ಕಿ ಬಾತ್ ನಲ್ಲಿಂದು ಚಿತ್ರದುರ್ಗ, ಕಲ್ಬುರ್ಗಿ ಕೋಟೆ, ಮಂಗಳೂರಿನ ಸ್ವಚ್ಚಭಾರತ್ ಅಭಿಯಾನ ಶ್ಲಾಘಿಸಿದ ಪ್ರಧಾನಿ ಮೋದಿ
- ಧರ್ಮಸ್ಥಳ ಪ್ರಕರಣ - ವಿಶೇಷ ತನಿಖಾ ತಂಡದಿಂದ ಮಂಗಳೂರಿನಲ್ಲಿ ದೂರುದಾರನ ತೀವ್ರ ವಿಚಾರಣೆ
- ದಾವಣಗೆರೆಯಲ್ಲಿ ಒನಕೆ ಓಬವ್ವ ಜಯಂತಿ ಆಚರಿಸಲು ಸರ್ಕಾರ ನಿರ್ಧಾರ
- ರಸಗೊಬ್ಬರ ಪೂರೈಕೆಯಲ್ಲಿ ಸರ್ಕಾರ ವಿಫಲ- ಬಿಜೆಪಿ ಆರೋಪ -ನಾಳೆ ಸರ್ಕಾರದ ವಿರುದ್ಧ ಪ್ರತಿಭಟನೆಗೆ ನಿರ್ಧಾರ
- ರಾಜ್ಯದ ಹಲವೆಡೆ ಭಾರೀ ಮಳೆ; ಕೊಡಗಿನಲ್ಲಿ ಜನಜೀವನ ಅಸ್ತವ್ಯಸ್ತ; ಹಲವಡೆ ಪ್ರವಾಸಿಗರಿಗೆ ನಿರ್ಬಂಧ

<><><><>

ದೇಶದಲ್ಲಿ ಬಾಹ್ಯಾಕಾಶ ನವೋದ್ಯಮಗಳು ವೇಗವಾಗಿ ಬೆಳೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ೧೨೪ನೇ ಆವೃತ್ತಿಯ 'ಮನ್ ಕಿ ಬಾತ್' ನಲ್ಲಿಂದು ಐದು ವರ್ಷಗಳ ಹಿಂದೆ, ದೇಶದಲ್ಲಿ ೫೦ಕ್ಕಿಂತ ಕಡಿಮೆ ನವೋದ್ಯಮಗಳು ಇದ್ದವು. ಇಂದು, ಬಾಹ್ಯಾಕಾಶ ವಲಯದಲ್ಲಿ ೨೦೦ಕ್ಕೂ ಹೆಚ್ಚು ನವೋದ್ಯಮಗಳು ಇವೆ ಎಂದು ಹೇಳಿದ್ದಾರೆ. ಜವಳಿ ವಲಯವು ದೇಶದ ಪ್ರಮುಖ ಶಕ್ತಿಯಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

ಧ್ವನಿ : ನರೇಂದ್ರ ಮೋದಿ , ಪ್ರಧಾನಮಂತ್ರಿ

ಇದೇ ವೇಳೆ ಕರ್ನಾಟಕದ ಕೋಟೆಗಳನ್ನೂ ಪ್ರಸ್ತಾಪಿಸಿರುವ ಪ್ರಧಾನಿ, ಗುಲ್ಬರ್ಗಾ ಕೋಟೆ, ಚಿತ್ರದುರ್ಗ ಕೋಟೆ ಅದ್ಭುತವಾಗಿವೆ ಎಂದು ವರ್ಣಿಸಿದ್ದಾರೆ. 'ಸ್ವಚ್ಛ ಭಾರತ್ ಅಭಿಯಾನದ'

ಯಶಸ್ಸಿನ ಬಗ್ಗೆ ಮಾಹಿತಿ ಹಂಚಿಕೊಂಡ ಪ್ರಧಾನಿ, ಮಂಗಳೂರಿನಲ್ಲಿ ತಂತ್ರಜ್ಞಾನದ ಮೂಲಕ ತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ಕಲಬುರಗಿ ಕೋಟೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತಮ್ಮ ಮನ್ ಕೀ ಬಾತ್ ನಲ್ಲಿ ಪ್ರಸ್ತಾಪ ಮಾಡಿರುವುದು ಕಲಬುರಗಿ ಮಾತ್ರವಲ್ಲದೇ ಕಲ್ಯಾಣ ಕರ್ನಾಟಕ ಭಾಗದ ಇತಿಹಾಸಪ್ರಿಯರು ಹಾಗೂ ಸ್ಥಳೀಯರಲ್ಲಿ ಸಂತಸ ತಂದಿದೆ. ಈ ಕೋಟೆಯನ್ನು ವಿಸ್ಮಯಕಾರಿ ರೀತಿಯ ವಾಸ್ತುಶಿಲ್ಪದಲ್ಲಿ ಕೆತ್ತನೆ ಮಾಡಲಾಗಿದೆ. ಬೇಸಿಗೆಯಲ್ಲಿ ಯಾವುದೇ ರೀತಿಯ ಫ್ಯಾನ್, ಎಸಿ ಬಳಕೆ ಮಾಡದಿದ್ದರೂ ಕೋಟೆಯೊಳಗೆ ತಂಪು ಇರೋದು ವಿಶೇಷವಾಗಿದೆ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಸಂಸ್ಥಾಪಕರಾದ ಡಾ. ಲಕ್ಷ್ಮಣ್ ದಸ್ತಿ ತಿಳಿಸಿದ್ದಾರೆ.

ಧ್ವನಿ: ಡಾ.ಲಕ್ಷ್ಮಣ ದಸ್ತಿ, ಸಂಸ್ಥಾಪಕ ಅಧ್ಯಕ್ಷರು.

<><><><>

ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ೨೨೩ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛತಾ ನಿರ್ವಹಣೆಯನ್ನು ಯಶಸ್ವಿಯಾಗಿ ನಿರ್ವಹಿಸಲಾಗುತ್ತಿದೆ. ಆಧುನಿಕ ತಂತ್ರಜ್ಞಾನದ ಮೂಲಕ ಒಣ ತ್ಯಾಜ್ಯ ನಿರ್ವಹಣೆಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ಸ್ವಚ್ಛ ಭಾರತ್ ಮಿಷನ್ ದಕ್ಷಿಣ ಕನ್ನಡ ಜಿಲ್ಲಾ ಮಾಹಿತಿ ಶಿಕ್ಷಣ ಸಂವಹನ ಸಮಾಲೋಚಕರಾದ ಡೊಂಬಯ್ಯ ಇಡ್ಕಿದು ಆಕಾಶವಾಣಿಗೆ ತಿಳಿಸಿದ್ದಾರೆ. ಸ್ಯಾನಿಟರಿ ಪ್ಯಾಡ್‌ಗಳು ಮತ್ತು ಡೈಪರ್‌ಗಳನ್ನು ವಿಲೇವಾರಿ ಮಾಡುವ ವೈಜ್ಞಾನಿಕ ವಿಧಾನವನ್ನು ಹೊಂದಲು ನೂತನ ಯೋಜನೆಯನ್ನು ಜಿಲ್ಲಾ ಪಂಚಾಯತ್ ಕಾರ್ಯಗತಗೊಳಿಸಿದೆ. ಮನ್ ಕಿ ಬಾತ್ ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಪ್ರಸ್ತಾಪಿಸಿರುವುದಕ್ಕೆ ಡೊಂಬಯ್ಯ ಇಡ್ಕಿದು ಸಂತಸ ವ್ಯಕ್ತ ಪಡಿಸಿದ್ದಾರೆ.

ಧ್ವನಿ : ಡೊಂಬಯ್ಯ ಇಡ್ಕಿದು

<><><><>

ಧರ್ಮಸ್ಥಳದಲ್ಲಿ ನೂರಾರು ಮೃತದೇಹಗಳನ್ನು ಹೂಳಲಾಗಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷಾ ತನಿಖಾ ತಂಡಾ ತನಿಖೆ ಚುರುಕುಗೊಳಿಸಿದೆ. ಸರ್ಕಾರ ನೇಮಿಸಿರುವ ವಿಶೇಷ ತನಿಖಾ ತಂಡದ ಎದುರು ದೂರುದಾರ ಹಾಜರಾಗಿದ್ದು ಸಾಕಷ್ಟು ಮಾಹಿತಿ ಒದಗಿಸಿದ್ದಾರೆ. ಎಸ್.ಐ.ಟಿ

ತಂಡದ ಮುಖ್ಯಸ್ಥ ಪ್ರಣಬ್ ಮೋಹಂತಿ ನೇತೃತ್ವದಲ್ಲಿ ಇಂದು ದೂರುದಾರನ ವಿಚಾರಣೆ ನಡೆದಿದೆ. ತನಿಖಾ ತಂಡದಲ್ಲಿ ಧರ್ಮಸ್ಥಳ ಮುಲ್ಕಿ, ಬೈಂದೂರು ಇನ್ಸ್ಪೆಕ್ಟರ್‌ಗಳು ಭಾಗವಹಿಸಿದ್ದಾರೆ.

<><><>

ನವೆಂಬರ್ ತಿಂಗಳಲ್ಲಿ ದಾವಣಗೆರೆಯಲ್ಲಿ ರಾಜ್ಯಮಟ್ಟದ ಒನಕೆ ಓಬವ್ವ ಜಯಂತಿಯನ್ನು ಹಮ್ಮಿಕೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಛಲವಾದಿ ಮಹಾಸಭಾದಿಂದ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒನಕೆ ಓಬವ್ವ ಛಲವಾದಿ ಸಮಾಜದ ದಿಟ್ಟ ಮಹಿಳೆ, ಅವರ ಸಾಹಸ ಮತ್ತು ತ್ಯಾಗ ಸಮಾಜಕ್ಕೆ ಸ್ಫೂರ್ತಿಯಾಗಿದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯ ಸರ್ಕಾರ ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ಪೂರೈಸುವಲ್ಲಿ ವಿಫಲವಾಗಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಗದಗ ಜಿಲ್ಲೆಯ ಲಕ್ಷ್ಮೇಶ್ವರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು. ದೆಹಲಿಗೆ ತೆರಳಿ ಸಂಬಂಧಿಸಿದ ಕೇಂದ್ರ ಸಚಿವರನ್ನು ಭೇಟಿ ಮಾಡುವುದಾಗಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಾಳೆಯಿಂದ ರಸಗೊಬ್ಬರ ಅಭಾವ ಕುರಿತಂತೆ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಹೋರಾಟ ನಡೆಸಲು ಬಿಜೆಪಿ ತೀರ್ಮಾನಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ರಾಜ್ಯದ ಹಲವೆಡೆ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತಿದ್ದು ವೇಗವಾಗಿ ಗಾಳಿ ಬೀಸುತ್ತಿರುವುದರಿಂದ ಹಲವೆಡೆ ಮರಗಳು, ವಿದ್ಯುತ್ ಕಂಬಗಳು ನೆಲಕುರುಳಿವೆ. ಹಲವೆಡೆ ರಸ್ತೆ ಸಂಪರ್ಕಗಳು ಕಡಿತಗೊಂಡಿದ್ದು ಜನಜೀವನ ಅಸ್ತವ್ಯಸ್ತಗೊಂಡಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆ, ಗಾಳಿಯ ಪರಿಸ್ಥಿತಿ ಮುಂದುವರೆದಿದೆ. ಸತತ ೩ ನೇ ದಿನವೂ ಜಿಲ್ಲೆಯಲ್ಲಿ ಧಾರಾಕಾರ ಮಳೆಯಿಂದಾಗಿ ಸಾಮಾನ್ಯ ಜನಜೀವನ ವ್ಯತ್ಯಯ ಕಂಡಿದೆ. ಭಾಗಮಂಡಲದ ತ್ರಿವೇಣಿ ಸಂಗಮದಲ್ಲಿ ಕಾವೇರಿ ಉಕ್ಕಿ ಹರಿಯುತ್ತಿದೆ. ಕಣಿವೆ ಗ್ರಾಮದಲ್ಲಿನ ತೂಗು ಸೇತುವೆ ಮೇಲೆ ಸ್ಥಳೀಯರು ಹಾಗೂ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ. ಶಿವಮೊಗ್ಗದಲ್ಲಿ ಭದ್ರಾ ಆಣೆಕಟ್ಟೆಗೆ

ಭಾರೀ ಪ್ರಮಾಣದಲ್ಲಿ ನೀರು ಹರಿದು ಬಂದಿದ್ದು, ಅಷ್ಟೇ ಪ್ರಮಾಣದ ನೀರು ಹೊರಗಡೆ ಬಿಡಲಾಗುತ್ತಿದೆ. ನದಿ ಪಾತ್ರದ ಜನರಿಗೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಹಾಸನ ಜಿಲ್ಲೆಯಾದ್ಯಂತ ಕಳೆದ ಮೂರ್ನಾಲ್ಕು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿದ್ದು ಹೇಮಾವತಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿ ಜಲಾಶಯದಿಂದ ೪೬ ಸಾವಿರದ ೩೫೦ ಕ್ಯೂಸೆಕ್ ನೀರು ಹೊರಕ್ಕೆ ಬಿಡಲಾಗುತ್ತಿದೆ. ಬಳ್ಳಾರಿ ಜಿಲ್ಲೆ ಕಂಪ್ಲಿ ಮತ್ತು ಕೊಪ್ಪಳಜಿಲ್ಲೆಯ ಗಂಗಾವತಿ ಪಟ್ಟಣಗಳ ಮಧ್ಯೆ ಸಂಪರ್ಕ ಕಲ್ಪಿಸುವ ತುಂಗಭದ್ರ ನದಿಯ ಸೇತುವೆ ಮೇಲೆ ವಾಹನ ಮತ್ತು ಜನ ಸಂಚಾರ ನಿಷೇಧಿಸಲಾಗಿದೆ. ತುಂಗಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದ ಹರಿದು ಬರುತ್ತಿರುವ ಹಿನ್ನೆಲೆಯಲ್ಲಿ ೬೦ ಸಾವಿರದಿಂದ ೧ ಲಕ್ಷದ ೪೦ ಸಾವಿರ ಕ್ಯೂಸೆಕ್ ನೀರನ್ನು ಜಲಾಶಯದ ೨೮ ಗೇಟುಗಳ ಮೂಲಕ ನೀರು ಬಿಡಲಾಗಿದೆ. ಜಲಾಶಯದ ಅಚ್ಚುಕಟ್ಟು ಪ್ರದೇಶಗಳಲ್ಲಿ ವಾಸಿಸುವ ಜನರು ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು ಎಂದು ವಿಜಯನಗರದ ಟಿಬಿ ಬೋರ್ಡ್ ಎಚ್ಚರಿಕೆ ನೀಡಿದೆ.

<><><><>

ರಾಜ್ಯದ ಕರಾವಳಿ ಕರ್ನಾಟಕ ಮತ್ತು ಉತ್ತರ ಕರ್ನಾಟಕದಲ್ಲಿ ಮಳೆ ಸಾಮಾನ್ಯವಾಗಿತ್ತು. ಹಲವೆಡೆ ಉತ್ತಮ ಮಳೆಯಾಗಿದೆ. ಕ್ಯಾಸಲ್‌ರಾಕ್ ಹಾಗೂ ಆಗುಂಬೆಯಲ್ಲಿ ತಲಾ ೨೨ ಸೆಂಟಿ ಮೀಟರ್ ಮಳೆಯಾಗಿದೆ. ಇಂದು ಕರಾವಳಿ ಜಿಲ್ಲೆ, ಹಾಸನ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಯ ಒಂದೆರಡು ಕಡೆ ಗಾಳಿ ಸಮೇತ ಭಾರೀ ಮಳೆಯಾಗಲಿದೆ. ಬೆಂಗಳೂರಿನಲ್ಲಿ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ರಾಜ್ಯದಲ್ಲಿ ಇದೇ ೩೧ರವರೆಗೆ ಭಾರೀ ಮಳೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

<><><><>

ಗದಗ ತಾಲೂಕಿನ ಸೊರಟೂರ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ೩೫ ನೇಯ ವರ್ಷದ ರೈತ ಹುತಾತ್ಮ ದಿನಾಚರಣೆ ಜರುಗಿತು. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಬಗರ್ ಹುಕುಂ ಚಳುವಳಿಯಲ್ಲಿ ಹುತಾತ್ಮರಾದ ಮಹಾಲಿಂಗಪ್ಪ ಮಲ್ಲೇಶಪ್ಪ ಗಿಡ್ಡಕೆಂಚಣ್ಣವರ, ಚನ್ನಬಸಪ್ಪ ನಿರ್ವಾಹಣಶೆಟ್ರ, ದೇವಲಪ್ಪ ಲಮಾಣಿ ಅವರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>